**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಎಸ್.ಎಲ್. ಭೋಜೇಗೌಡ, ರವರು ಶೂನ್ಯ ವೇಳೆಯಲ್ಲಿ ಪ್ರಸ್ತಾಪಿಸಿರುವ ಸೂಚನೆಗೆ ಉತ್ತರಿಸುವ ಕುರಿತು.**

## ವಿಷಯ

ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಅನುದಾನ ಮತ್ತು ಅನುದಾನ ರಹಿತ ಶಾಲೆಗಳ ಮಾನ್ಯತೆ ನವೀಕರಣಕ್ಕೆ ಸಂಬಂಧಿಸಿದಂತೆ ನೋಂದಣಿ ಶುಲ್ಕವಾಗಿ ರೂ. 10,000/- (ಹತ್ತು ಸಾವಿರ ರೂಪಾಯಿಗಳು) ಗಳನ್ನು ಕಟ್ಟಿಸಿಕೊಂಡಿದ್ದರೂ ಸಹ ದಾಖಲೆಗಳಲ್ಲಿ ಏರುಪೇರಾದ ಕಾರಣ ತಿರಸ್ಕೃತಗೊಂಡ ಅರ್ಜಿಗಳನ್ನು ಪುನ: ನೋಂದಣಿ ಮಾಡಿಕೊಳ್ಳಲು ಎರಡನೇ ಬಾರಿ ರೂ.10,000/-ಗಳನ್ನು (ಎರಡು ಬಾರಿ) ಕಟ್ಟಿಸಿಕೊಳ್ಳುತ್ತಿರುವ ವಿಷಯದ ಬಗ್ಗೆ.

## ಉತ್ತರ

ಖಾಸಗಿ ಶಾಲೆಗಳ ಮಾನ್ಯತೆಗೆ ಸಂಬಂಧಿಸಿದಂತೆ, ಪ್ರತಿ ವರ್ಷ ಆನ್ ಲೈನ್ ನಲ್ಲಿ ಅರ್ಜಿಗಳನ್ನು ಆಹ್ವಾನಿಸಿ 05 ವರ್ಷಗಳಿಗೆ (ಮುಚ್ಚಳಿಕೆ ಪತ್ರ ಪಡೆದು ಪರಿಶೀಲಿಸಿ) ಮಾನ್ಯತೆ ನವೀಕರಿಸಲಾಗುತ್ತದೆ. ಈ ನವೀಕರಣಕ್ಕೆ ಸಂಸ್ಕರಣ ಶುಲ್ಕವಾಗಿ ಪ್ರೌಢಶಾಲೆಗಳಿಗೆ 10,000/- ಹಾಗೂ ಪ್ರಾಥಮಿಕ ಶಾಲೆಗಳಿಗೆ 5,000/-ಗಳನ್ನು ಅಧಿಸೂಚನೆ ಸಂಖ್ಯೆ ಇಡಿ 709 ಪಿಜಿಸಿ 2017, ದಿನಾಂಕ 07-03-2018ರಲ್ಲಿ ನಿಗದಿಪಡಿಸಲಾಗಿದ್ದು, ಮಾನ್ಯತೆ ನವೀಕರಣ ಕುರಿತು ಒಂದು ಬಾರಿ ಪಾವತಿಸಿದ್ದಲ್ಲಿ/ ತಪ್ಪಾಗಿ ನಮೂದಿಸಿದ್ದಲ್ಲಿ ಮರುಪಾವತಿಸಲಾಗುವುದಿಲ್ಲ ಎಂದು ನಿಯಮಗಳಲ್ಲಿ ತಿಳಿಸಲಾಗಿದೆ.

ಅನುದಾನ ಮತ್ತು ಅನುದಾನರಹಿತ ಶಾಲೆಗಳ ಮಾನ್ಯತೆ ನವೀಕರಣಕ್ಕೆ ಸಂಬಂಧಿಸಿದಂತೆ ಸಂಸ್ಕರಣಾ ಶುಲ್ಕವನ್ನು ಒಂದು ವರ್ಷದ ಅವಧಿಯವರೆಗೂ ಸೀಮಿತಗೊಳಿಸಲು ನಿಯಮಕ್ಕೆ ತಿದ್ದುಪಡಿ ತರುವ ಬಗ್ಗೆ ಪ್ರಸ್ತಾವನೆ ಸಲ್ಲಿಸುವಂತೆ ಆಯುಕ್ತಾಲಯಕ್ಕೆ ನಿರ್ದೇಶಿಸಲಾಗಿದ್ದು, ಪ್ರಸ್ತಾವನೆ ಸ್ವೀಕೃತಗೊಂಡ ನಂತರ ಪರಿಶೀಲಿಸಿ ತಿದ್ದುಪಡಿ ಮಾಡುವ ಬಗ್ಗೆ ಕ್ರಮವಹಿಸಲಾಗುವುದು.

**ಸಂಖ್ಯೆ:ಇಪಿ 381 ಪಿಜಿಸಿ 2023**

**(ಎಸ್. ಮಧು ಬಂಗಾರಪ್ಪ)**
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು